## ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

ಸಿ.ಸಿ.31/2022

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| ಹೆಸರು | : | ರುದ್ರಾಚಾರಿ | CW: 3 | PW: 1 |
| ತಂದೆಯ ಹೆಸರು | : | ವೀರಾಚಾರಿ | | |
| ವಯಸ್ಸು | : | 61 | | |
| ವೃತ್ತಿ | : | ಕಾರ್ಪೆಂಟರ್ | | |
| ವಾಸಸ್ಥಳ | : | ಕೋಟೆಹಾಳ್ ಗ್ರಾಮ | | |

ದಿನಾಂಕಃ 30.07.2026 ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಭೋಧಿಸಲಾಯಿತು.

ಮುಖ್ಯವಿಚಾರಣೆಃ – ಮಾನ್ಯ ಸ.ಸ.ಅ.ರವರಿಂದಃ–

ಆರೋಪಿಗಳು ಗೊತ್ತು. ಚಾಸಾ 1 ಮತ್ತು 2 ರವರು ಗೊತ್ತು. ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ನಾನು ಯಾವುದೇ ಗಲಾಟೆ ನೋಡಿಲ್ಲ. ಈ ಪ್ರಕರಣದ ಸಂಬಂಧ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಆ್ಯಂಬುಲೆನ್ಸ್‌ನಲ್ಲಿ ಚಾಸಾ 1 ರವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ.

(ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ–

ದಿಃ 05.01.2021 ರಂದು ಬೆಳಗ್ಗೆ 10.30 ರ ಸಮಯದಲ್ಲಿ ನಾನು ನಮ್ಮ ಜಮೀನಿನ ಹತ್ತಿರ ರಸ್ತೆಯಲ್ಲಿ ಹೋಗುತ್ತಿದ್ದಾಗ ಆರೋಪಿಗಳೆಲ್ಲರೂ ಅಕ್ರಮವಾಗಿ ಗುಂಪುಕಟ್ಟಿಕೊಂಡು ಚಾಸಾ

1 ರವರ ಮೇಲೆ ಜಗಳ ತೆಗೆದು ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. 2 ಮತ್ತು 3 ನೇ ಆರೋಪಿರು ಚಾಸಾ 1 ರವರಿಗೆ ಕಣೆಗೆಯಿಂದ ಮೈಕೈಗೆ ಹೊಡೆದು ಹಲ್ಲೆ ಮಾಡಿದರು ಎಂದರೆ ಸರಿಯಲ್ಲ. 1 ನೇ ಆರೋಪಿಯು ಕಬ್ಬಿಣದ ಮಚ್ಚಿನಿಂದ ಚಾಸಾ 1 ರವರ ತಲೆಗೆ ಹೊಡೆದು ರಕ್ತಗಾಯಪಡಿಸಿದರು ಎಂದರೆ ಸರಿಯಲ್ಲ. ಆರೋಪಿಗಳೆಲ್ಲರೂ ಚಾಸಾ 1 ರವರು ನೆಲಕ್ಕೆ ಬೀಳಿಸಿ ಕೈಕಾಲುಗಳಿಂದ ಮೈಕೈಗೆ ಹೊಡೆದು ಹಲ್ಲೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗಳೆಲ್ಲರೂ ಚಾಸಾ 1 ರವರಿಗೆ ಪ್ರಾಣ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಈ ಜಗಳವನ್ನು ನಾನು ಮತ್ತು ಚಾಸಾ 2 ರವರು ಜಗಳ ಬಿಡಿಸಿದೆವು ಎಂದರೆ ಸರಿಯಲ್ಲ. ಈ ಪ್ರಕರಣದ ಸಂಬಂಧ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಒಪ್ಪದ ಹೇಳಿಕೆಯನ್ನು ನಿಪಿ 1 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರಗಳು ಗೊತ್ತಿದ್ದರೂ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ- ಆರೋಪಿಗಳ ಪರ ವಕೀಲರಿಂದಃ-

ಆರೋಪಿಗಳ ಪರ ವಕೀಲರು ಪಾಟೀ ಸವಾಲು ಏನು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.